ದಿಃ 12-09-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿ ಪರವಾಗಿ ಶ್ರೀ ಎ ಎಫ್ ಕೆ ಕೀಲರಿಂದ.

ಈ ದಾವೆಯಲ್ಲಿ ನಾನು 4 ನೇ ವಾದಿಯಾಗಿದ್ದು, ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

**ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ**

1) ಒಂದು ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿಪಿ 1 ಎಂದು,**

2) ಒಂದು ವ್ಯಂಶವೃಕ್ಷ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿಪಿ 2 ಎಂದು,**

3) ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು **ನಿಪಿ 3 ಎಂದು.**

4) ಮೂರು ದಾಖಲಾತಿ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು **ನಿಪಿ 4 ರಿಂದ 6 ಎಂದು** ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ).

ಓ.ಹೆ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ., ಹಳಿಯಾಳ.